# ‘ರಾಮಾಯಣ’ ಚಿತ್ರದ ಬಿಡುಗಡೆ ಮುಂದೂಡಿಕೆ? ವದಂತಿಗಳಿಗೆ ತೆರೆ ಎಳೆದ ಚಿತ್ರತಂಡ!



ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಅತ್ಯಂತ ನಿರೀಕ್ಷೆ ಮೂಡಿಸಿರುವ ಹಾಗೂ ಭಾರಿ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿರುವ ಸಿನಿಮಾಗಳ ಪೈಕಿ ‘ರಾಮಾಯಣ’ ಒಂದು. ಭಾರತೀಯ ಪುರಾಣದ ಮಹಾಕಾವ್ಯವಾದ ರಾಮಾಯಣವನ್ನು ಆಧುನಿಕ ತಂತ್ರಜ್ಞಾನ ಹಾಗೂ ಜಾಗತಿಕ ಮಟ್ಟದ ನಿರ್ಮಾಣ ಗುಣಮಟ್ಟದೊಂದಿಗೆ ತೆರೆಗೆ ತರಲು ಚಿತ್ರತಂಡ ಸಜ್ಜಾಗಿದೆ. ಬಾಲಿವುಡ್ ನಟ ರಣಬೀರ್ ಕಪೂರ್, ಕನ್ನಡದ ರಾಕಿಂಗ್ ಸ್ಟಾರ್ ಯಶ್, ಪ್ರತಿಭಾವಂತ ನಟಿ ಸಾಯಿ ಪಲ್ಲವಿ ಸೇರಿದಂತೆ ಹಲವು ಖ್ಯಾತ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸುತ್ತಿದ್ದು, ಸಿನಿಮಾ ಈಗಾಗಲೇ ದೇಶ–ವಿದೇಶಗಳಲ್ಲಿ ಅಪಾರ ಕುತೂಹಲ ಹುಟ್ಟುಹಾಕಿದೆ. ನಿರ್ಮಾಪಕ ನಮಿತ್ ಮಲ್ಹೋತ್ರಾ ಈ ಚಿತ್ರವನ್ನು ಕೇವಲ ಭಾರತೀಯ ಪ್ರೇಕ್ಷಕರಿಗಷ್ಟೇ ಅಲ್ಲದೆ, ವಿಶ್ವ ಸಿನಿಮಾ ರಂಗಕ್ಕಾಗಿ ಭಾರತದಿಂದ ನಿರ್ಮಿಸಲಾಗುತ್ತಿರುವ ಮಹತ್ವಾಕಾಂಕ್ಷೆಯ ಯೋಜನೆ ಎಂದು ಹಲವು ಬಾರಿ ಹೇಳಿಕೊಂಡಿದ್ದಾರೆ.

ಚಿತ್ರದ ಪ್ರಚಾರ ಕಾರ್ಯಗಳು ಈಗಾಗಲೇ ಆರಂಭಗೊಂಡಿದ್ದು, ಮೊದಲ ನೋಟ ಹಾಗೂ ಪರಿಚಯ ವಿಡಿಯೊಗಳು ಸಿನಿಪ್ರಿಯರಲ್ಲಿ ದೊಡ್ಡ ಮಟ್ಟದ ನಿರೀಕ್ಷೆ ಮೂಡಿಸಿವೆ. ಟೀಸರ್ ಬಿಡುಗಡೆಗೆ ಆರಂಭದಲ್ಲಿ ಕೆಲ ವಿಳಂಬಗಳಾಗಿದ್ದರೂ, ನಂತರ ಬಿಡುಗಡೆಯಾದ ಅಧಿಕೃತ ಪರಿಚಯ ವಿಡಿಯೊದಲ್ಲಿ ಚಿತ್ರದ ಮೊದಲ ಭಾಗ ಇದೇ ವರ್ಷದ ದೀಪಾವಳಿ ಹಬ್ಬದಂದು ಬಿಡುಗಡೆಯಾಗಲಿದೆ ಎಂದು ಘೋಷಿಸಲಾಗಿ–ತ್ತು. ಈ ಘೋಷಣೆಯ ಬಳಿಕ ಅಭಿಮಾನಿಗಳ ಉತ್ಸಾಹ ಮತ್ತಷ್ಟು ಹೆಚ್ಚಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳು ಮತ್ತು ಕೆಲವು ಮಾಧ್ಯಮಗಳಲ್ಲಿ ಚಿತ್ರದ ಬಿಡುಗಡೆ ದಿನಾಂಕ ಮುಂದೂಡಲ್ಪಡಬಹುದು ಎಂಬ ಸುದ್ದಿಗಳು ಹರಿದಾಡುತ್ತಿವೆ.

ಕೆಲ ವರದಿಗಳ ಪ್ರಕಾರ, ಜಾಗತಿಕ ಮಟ್ಟದಲ್ಲಿ ಉಂಟಾಗಿರುವ ಯುದ್ಧ ಪರಿಸ್ಥಿತಿಗಳು, ತಾಂತ್ರಿಕ ಸವಾಲುಗಳು ಹಾಗೂ ಕೆಲವು ದೃಶ್ಯಗಳ ಮರು ವಿಎಫ್‌ಎಕ್ಸ್ ಕೆಲಸ ಮತ್ತು ಮರು ಚಿತ್ರೀಕರಣ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸಿನಿಮಾ ತಡವಾಗುವ ಸಾಧ್ಯತೆ ಇದೆ ಎಂಬ ಊಹಾಪೋಹಗಳು ಕೇಳಿಬಂದಿವೆ. ವಿಶೇಷವಾಗಿ, ವಿಶ್ವಮಟ್ಟದ ದೃಶ್ಯ ವೈಭವ ಹೊಂದಿರುವ ಈ ಸಿನಿಮಾದಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಬಳಸಲಾಗುತ್ತಿರುವುದರಿಂದ ಕೆಲವು ದೃಶ್ಯಗಳನ್ನು ಇನ್ನಷ್ಟು ಉತ್ತಮಗೊಳಿಸುವ ಕೆಲಸ ನಡೆಯುತ್ತಿದೆ ಎಂಬ ವರದಿಗಳೂ ಹರಿದಾಡಿವೆ.

ಆದರೆ ಚಿತ್ರತಂಡದ ಆಪ್ತ ಮೂಲಗಳ ಪ್ರಕಾರ, ಈ ಎಲ್ಲ ಸುದ್ದಿಗಳು ಕೇವಲ ವದಂತಿಗಳಾಗಿದ್ದು, ಚಿತ್ರದ ಬಿಡುಗಡೆಯ ದಿನಾಂಕದಲ್ಲಿ ಯಾವುದೇ ಬದಲಾವಣೆ ಇಲ್ಲ ಎನ್ನಲಾಗಿದೆ. ಈ ಹಿಂದೆ ಘೋಷಿಸಿರುವಂತೆ ಸಿನಿಮಾ ಇದೇ ವರ್ಷದ ದೀಪಾವಳಿ ಹಬ್ಬದಂದೇ ಬಿಡುಗಡೆಯಾಗಲಿದ್ದು, ನಿಗದಿತ ವೇಳಾಪಟ್ಟಿಯಂತೆ ನಿರ್ಮಾಣ ಕಾರ್ಯಗಳು ವೇಗವಾಗಿ ಸಾಗುತ್ತಿವೆ ಎಂದು ತಿಳಿದುಬಂದಿದೆ. ಹೀಗಾಗಿ ಅಭಿಮಾನಿಗಳು ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಲಾಗುತ್ತಿದೆ.

ಈ ಸಿನಿಮಾ ಕೇವಲ ಹಿಂದಿ ಭಾಷೆಗೆ ಸೀಮಿತವಾಗದೇ, ಕನ್ನಡ, ತೆಲುಗು, ತಮಿಳು ಮತ್ತು ಮಲಯಾಳಂ ಸೇರಿದಂತೆ ಹಲವು ಭಾರತೀಯ ಭಾಷೆಗಳಲ್ಲಿ ಡಬ್ ಆಗಿ ಬಿಡುಗಡೆಯಾಗಲಿದೆ. ಜೊತೆಗೆ ಕೆಲವು ವಿದೇಶಿ ಭಾಷೆಗಳಲ್ಲಿಯೂ ಚಿತ್ರ ಬಿಡುಗಡೆಯಾಗುವ ಸಾಧ್ಯತೆ ಇದೆ. ಭಾರತೀಯ ಸಂಸ್ಕೃತಿ ಮತ್ತು ಪುರಾಣ ಪರಂಪರೆಯನ್ನು ಜಾಗತಿಕ ಪ್ರೇಕ್ಷಕರಿಗೆ ತಲುಪಿಸುವ ಉದ್ದೇಶದಿಂದ ಈ ಚಿತ್ರವನ್ನು ವಿಶ್ವಮಟ್ಟದ ಗುಣಮಟ್ಟದಲ್ಲಿ ನಿರ್ಮಿಸಲಾಗುತ್ತಿದೆ.

ಭಾರತದಲ್ಲಿ ಚಿತ್ರದ ಅಧಿಕೃತ ಪ್ರಚಾರ ಇನ್ನೂ ಪೂರ್ಣ ಪ್ರಮಾಣದಲ್ಲಿ ಆರಂಭವಾಗಿಲ್ಲ. ಆದರೆ ಮುಂಬರುವ ದಿನಗಳಲ್ಲಿ ಭಾರೀ ಮಟ್ಟದ ಪ್ರಚಾರ ಅಭಿಯಾನ ಆರಂಭವಾಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಪಾತ್ರ ಪರಿಚಯಗಳು, ವಿಶೇಷ ಕಾರ್ಯಕ್ರಮಗಳು ಹಾಗೂ ಜಾಗತಿಕ ಮಟ್ಟದ ಪ್ರಚಾರ ತಂತ್ರಗಳ ಮೂಲಕ ಚಿತ್ರವನ್ನು ಪ್ರೇಕ್ಷಕರಿಗೆ ಪರಿಚಯಿಸುವ ಯೋಜನೆ ರೂಪಿಸಲಾಗಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಈ ಸಿನಿಮಾದಲ್ಲಿ ರಣಬೀರ್ ಕಪೂರ್ ಶ್ರೀರಾಮನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದು, ಸಾಯಿ ಪಲ್ಲವಿ ಸೀತೆಯ ಪಾತ್ರಕ್ಕೆ ಜೀವ ತುಂಬಲಿದ್ದಾರೆ. ಇನ್ನೊಂದೆಡೆ, ಕನ್ನಡದ ಖ್ಯಾತ ನಟ ಯಶ್ ರಾವಣನ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿರುವುದು ಅಭಿಮಾನಿಗಳಲ್ಲಿ ಭಾರೀ ಕುತೂಹಲ ಮೂಡಿಸಿದೆ. ಈ ಪಾತ್ರಗಳ ಆಯ್ಕೆಯೇ ಸಿನಿಮಾದ ಮೇಲಿನ ನಿರೀಕ್ಷೆಯನ್ನು ಹಲವು ಪಟ್ಟು ಹೆಚ್ಚಿಸಿದೆ.

ಚಿತ್ರದ ಮತ್ತೊಂದು ವಿಶೇಷವೆಂದರೆ ಸಂಗೀತ. ಆಸ್ಕರ್ ಪ್ರಶಸ್ತಿ ವಿಜೇತ ಹಾಲಿವುಡ್ ಸಂಗೀತ ನಿರ್ದೇಶಕ ಹ್ಯಾನ್ಸ್ ಝಿಮ್ಮರ್ ಹಾಗೂ ಭಾರತದ ಖ್ಯಾತ ಸಂಗೀತ ನಿರ್ದೇಶಕ ಎ.ಆರ್. ರೆಹಮಾನ್ ಮೊದಲ ಬಾರಿಗೆ ಒಂದೇ ಚಿತ್ರಕ್ಕಾಗಿ ಕೈಜೋಡಿಸಿರುವುದು ವಿಶೇಷವಾಗಿದೆ. ಭಾರತೀಯ ಮತ್ತು ಜಾಗತಿಕ ಸಂಗೀತ ಶೈಲಿಗಳ ಸಂಯೋಜನೆಯೊಂದಿಗೆ ಪ್ರೇಕ್ಷಕರಿಗೆ ವಿಭಿನ್ನ ಅನುಭವ ನೀಡುವ ಪ್ರಯತ್ನ ನಡೆಯುತ್ತಿದೆ.

ಅತ್ಯಾಧುನಿಕ ವಿಎಫ್‌ಎಕ್ಸ್ ತಂತ್ರಜ್ಞಾನ, ಭವ್ಯ ದೃಶ್ಯ ವೈಭವ ಮತ್ತು ಜಾಗತಿಕ ಮಟ್ಟದ ನಿರ್ಮಾಣ ಮೌಲ್ಯಗಳೊಂದಿಗೆ ತಯಾರಾಗುತ್ತಿರುವ ಈ ಚಿತ್ರವನ್ನು ನಿರ್ದೇಶಕ ನಿತೇಶ್ ತಿವಾರಿ ನಿರ್ದೇಶಿಸುತ್ತಿದ್ದಾರೆ. ಭಾರತೀಯ ಪುರಾಣದ ಮಹಾಕಾವ್ಯವನ್ನು ಆಧುನಿಕ ರೂಪದಲ್ಲಿ ಜಗತ್ತಿನ ಮುಂದೆ ತರುವ ಕನಸಿನ ಭಾಗವಾಗಿ ಈ ಸಿನಿಮಾ ನಿರ್ಮಾಣವಾಗುತ್ತಿದೆ.

ಚಿತ್ರದ ಮೊದಲ ಭಾಗ ಇದೇ ವರ್ಷದ ದೀಪಾವಳಿ ಹಬ್ಬದಂದು ಬಿಡುಗಡೆಯಾಗಲಿದ್ದು, ಎರಡನೇ ಭಾಗ ಮುಂದಿನ ವರ್ಷದ ದೀಪಾವಳಿ ಹಬ್ಬದ ವೇಳೆಗೆ ಬಿಡುಗಡೆಯಾಗುವ ನಿರೀಕ್ಷೆಯಿದೆ. ಒಟ್ಟಾರೆಯಾಗಿ, ‘ರಾಮಾಯಣ’ ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಅತ್ಯಂತ ಮಹತ್ವಾಕಾಂಕ್ಷೆಯ ಮತ್ತು ದೊಡ್ಡ ಮಟ್ಟದ ಯೋಜನೆಗಳಲ್ಲಿ ಒಂದಾಗಿ ಗುರುತಿಸಿಕೊಂಡಿದ್ದು, ಅದರ ಬಿಡುಗಡೆಯನ್ನು ಸಿನಿಪ್ರಿಯರು ಕಾತರದಿಂದ ಎದುರು ನೋಡುತ್ತಿದ್ದಾರೆ.

# ಅತ್ಯಾಚಾರ ಎಸಗಿದ ತಂದೆಗೆ 20 ವರ್ಷ ಶಿಕ್ಷೆ

**ಬೆಂಗಳೂರು:** ತನ್ನ ಮೇಲೆಯೇ ಅತ್ಯಾಚಾರ ಎಸಗಿದ್ದ ತಂದೆಯ ವಿರುದ್ಧ ಧೈರ್ಯದಿಂದ ಕಾನೂನು ಹೋರಾಟ ನಡೆಸಿದ ಅಪ್ರಾಪ್ತೆಯೊಬ್ಬಳು ಕೊನೆಗೂ ನ್ಯಾಯ ಪಡೆದಿರುವ ಘಟನೆ ಬೆಂಗಳೂರಿನಲ್ಲಿ ಬೆಳಕಿಗೆ ಬಂದಿದೆ. 16 ವರ್ಷದ ಮಗಳ ಮೇಲೆ ಅತ್ಯಾಚಾರ ಎಸಗಿದ್ದ ದಿನಗೂಲಿ ಕಾರ್ಮಿಕನಿಗೆ ನಗರದ ವಿಶೇಷ ನ್ಯಾಯಾಲಯ 20 ವರ್ಷಗಳ ಸರಳ ಕಾರಾಗೃಹ ಶಿಕ್ಷೆ ಹಾಗೂ 1.10 ಲಕ್ಷ ರೂ. ದಂಡ ವಿಧಿಸಿದೆ. ಮೂರು ವರ್ಷಗಳ ಕಾಲ ನಡೆದ ಕಾನೂನು ಹೋರಾಟದಲ್ಲಿ ತಾಯಿ ಸೇರಿದಂತೆ ಕುಟುಂಬದ ಬೆಂಬಲವಿಲ್ಲದಿದ್ದರೂ ಬಾಲಕಿ ಧೈರ್ಯ ಕಳೆದುಕೊಳ್ಳದೆ ನ್ಯಾಯಕ್ಕಾಗಿ ಹೋರಾಡಿ ಆರೋಪಿಗೆ ಶಿಕ್ಷೆ ಕೊಡಿಸುವಲ್ಲಿ ಯಶಸ್ವಿಯಾಗಿದ್ದಾಳೆ.

ಆರೋಪಿ ಬಿಹಾರ ಮೂಲದ ದಿನಗೂಲಿ ಕಾರ್ಮಿಕನಾಗಿದ್ದು, ಪತ್ನಿ ಹಾಗೂ ನಾಲ್ವರು ಮಕ್ಕಳೊಂದಿಗೆ ಉತ್ತರ ಬೆಂಗಳೂರಿನಲ್ಲಿ ವಾಸಿಸುತ್ತಿದ್ದ. ಸಂತ್ರಸ್ತೆ ಆತನ ಹಿರಿಯ ಮಗಳಾಗಿದ್ದು, 9ನೇ ತರಗತಿಯ ನಂತರ ಶಾಲೆ ತೊರೆದಿದ್ದಳು. ತಂದೆ ಮದುವೆಗೆ ಒತ್ತಾಯಿಸುತ್ತಿದ್ದ ಹಿನ್ನೆಲೆಯಲ್ಲಿ ಆಕೆ ಉತ್ತರ ಪ್ರದೇಶದಲ್ಲಿರುವ ಸಂಬಂಧಿಕರ ಮನೆಯಲ್ಲಿ ವಾಸಕ್ಕೆ ತೆರಳಿದ್ದಳು. ಇದೇ ವೇಳೆ 2023ರ ಜೂನ್ 12ರಂದು ಆರೋಪಿಯ ತಾಯಿ ಬಿಹಾರದಲ್ಲಿ ನಿಧನರಾದ ಕಾರಣ ಕುಟುಂಬದ ಸದಸ್ಯರೆಲ್ಲರೂ ಊರಿಗೆ ತೆರಳಿದ್ದರು. ಈ ಸಂದರ್ಭದಲ್ಲಿ ಇನ್ನು ಮುಂದೆ ಮದುವೆಗೆ ಒತ್ತಾಯಿಸುವುದಿಲ್ಲ ಎಂದು ಮಗಳಿಗೆ ಆರೋಪಿ ಭರವಸೆ ನೀಡಿದ್ದ ಎನ್ನಲಾಗಿದೆ.

ನಂತರ ಆರೋಪಿ ಬೆಂಗಳೂರಿಗೆ ಮರಳಿದ್ದರೆ, ಮಗಳೂ ಕೆಲವು ದಿನಗಳ ಬಳಿಕ ಬೆಂಗಳೂರಿಗೆ ಬಂದಿದ್ದಳು. ಆದರೆ 2023ರ ಜೂನ್ 27ರ ರಾತ್ರಿ ಮದ್ಯದ ಅಮಲಿನಲ್ಲಿದ್ದ ಆರೋಪಿ, ಉತ್ತರ ಪ್ರದೇಶದಲ್ಲಿದ್ದಾಗ ಮಗಳಿಗೆ ಪ್ರೇಮ ಸಂಬಂಧವಿತ್ತು ಎಂಬ ಅನುಮಾನ ವ್ಯಕ್ತಪಡಿಸಿ, ಆಕೆಯನ್ನು ಪರೀಕ್ಷೆ ಮಾಡುವ ನೆಪದಲ್ಲಿ ಅತ್ಯಾಚಾರ ಎಸಗಿದ್ದ ಎಂದು ಆರೋಪಿಸಲಾಗಿದೆ. ತಂದೆಯೇ ಇಂತಹ ಕೃತ್ಯ ಎಸಗಿದ್ದರಿಂದ ಬಾಲಕಿ ತೀವ್ರ ಆಘಾತಕ್ಕೆ ಒಳಗಾಗಿದ್ದಳು ಎಂದು ತಿಳಿದುಬಂದಿದೆ.

ಘಟನೆ ನಡೆದ ಬಳಿಕ ಬಾಲಕಿ ಮನೆಯಿಂದ ತಪ್ಪಿಸಿಕೊಂಡು ಸಮೀಪದ ಉದ್ಯಾನವನವೊಂದರಲ್ಲಿ ಇಡೀ ರಾತ್ರಿ ಕಳೆದಿದ್ದಳು. ಯಾವುದೇ ನೆರವಿಲ್ಲದ ಪರಿಸ್ಥಿತಿಯಲ್ಲೂ ಧೈರ್ಯ ಕಳೆದುಕೊಳ್ಳದ ಆಕೆ, ಮರುದಿನ ಬೆಳಗ್ಗೆ ಆಟೋ ರಿಕ್ಷಾ ಚಾಲಕನೊಬ್ಬನ ಸಹಾಯ ಪಡೆದು ಸಮೀಪದ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದ್ದಳು. ಆಕೆಯ ಧೈರ್ಯ ಮತ್ತು ಸಮಯೋಚಿತ ನಿರ್ಧಾರದಿಂದಲೇ ಪ್ರಕರಣ ಬೆಳಕಿಗೆ ಬಂದಿದ್ದು, ಆರೋಪಿಯನ್ನು ಬಂಧಿಸಲು ಸಾಧ್ಯವಾಗಿದೆ.

ದೂರು ದಾಖಲಿಸಿಕೊಂಡ ಪೊಲೀಸರು ತಕ್ಷಣವೇ ತನಿಖೆ ಆರಂಭಿಸಿ ಆರೋಪಿಯನ್ನು ಬಂಧಿಸಿದ್ದರು. ಬಾಲಕಿಂ–ಯನ್ನು ರಕ್ಷಣೆಗಾಗಿ ಸರ್ಕಾರಿ ಮಹಿಳಾ ಆಶ್ರಯ ಕೇಂದ್ರಕ್ಕೆ ಸ್ಥಳಾಂತರಿಸಲಾಗಿತ್ತು. ತನಿಖೆಯ ವೇಳೆ ವೈದ್ಯಕೀಯ ವರದಿಗಳು, ಸಂತ್ರಸ್ತೆಯ ಹೇಳಿಕೆ ಹಾಗೂ ಇತರೆ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿತ್ತು. ಈ ಎಲ್ಲಾ ಸಾಕ್ಷ್ಯಾಧಾರಗಳ ಆಧಾರದ ಮೇಲೆ ನ್ಯಾಯಾಲಯ ಆರೋಪಿಯ ವಿರುದ್ಧದ ಆರೋಪ ಸಾಬೀತಾಗಿದೆ ಎಂದು ತೀರ್ಪು ನೀಡಿದೆ.

ಪ್ರಕರಣದ ಮತ್ತೊಂದು ನೋವಿನ ಸಂಗತಿಯೆಂದರೆ, ಸಂತ್ರಸ್ತೆಗೆ ಕುಟುಂಬದಿಂದಲೇ ನಿರೀಕ್ಷಿತ ಬೆಂಬಲ ದೊರೆಯಲಿಲ್ಲ ಎನ್ನುವುದು. ಪೊಲೀಸರು ತಾಯಿಯನ್ನು ಬೆಂಗಳೂರಿಗೆ ಕರೆಸಿದಾಗ, ಮಗಳಿಗೆ ಬೆಂಬಲ ನೀಡುವ ಬದಲು ತಂದೆಯ ವಿರುದ್ಧ ಪ್ರಕರಣ ದಾಖಲಿಸಿದ್ದಕ್ಕೆ ಗದರಿಸಿದ್ದಳು ಎಂದು ತಿಳಿದುಬಂದಿದೆ. ಕುಟುಂಬದ ಬೆಂಬಲವಿಲ್ಲದ ಪರಿಸ್ಥಿತಿಯಲ್ಲೂ ಬಾಲಕಿ ಏಕಾಂಗಿಯಾಗಿ ಕಾನೂನು ಹೋರಾಟ ಮುಂದುವ–ರಿಸಿದ್ದು, ಆಕೆಯ ಧೈರ್ಯ ಅನೇಕರ ಮೆಚ್ಚುಗೆಗೆ ಪಾತ್ರವಾಗಿದೆ.

ವಿಶೇಷ ನ್ಯಾಯಾಲಯ ಪ್ರಕರಣದ ವಿಚಾರಣೆ ಪೂರ್ಣಗೊಳಿಸಿ ಆರೋಪಿಗೆ 20 ವರ್ಷಗಳ ಸರಳ ಕಾರಾಗೃಹ ಶಿಕ್ಷೆ ಹಾಗೂ 1.10 ಲಕ್ಷ ರೂ. ದಂಡ ವಿಧಿಸಿದೆ. 2023ರ ಜೂನ್‌ನಿಂದಲೇ ಆರೋಪಿಯು ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿದ್ದಾನೆ. ಪ್ರಸ್ತುತ 19 ವರ್ಷದ ಯುವತಿಯಾಗಿರುವ ಸಂತ್ರಸ್ತೆ ಟೈಲರಿಂಗ್ ಕೆಲಸ ಮಾಡಿಕೊಂಡು ಸ್ವಾವಲಂಬಿ ಜೀವನ ನಡೆಸುತ್ತಿದ್ದಾಳೆ ಎಂದು ವರದಿಯಾಗಿದೆ.

ಈ ಘಟನೆ ಮಹಿಳೆಯರು ಮತ್ತು ಮಕ್ಕಳ ವಿರುದ್ಧ ನಡೆಯುವ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಧೈರ್ಯವಾಗಿ ಕಾನೂನಿನ ಮೊರೆ ಹೋಗುವ ಅಗತ್ಯವನ್ನು ಮತ್ತೊಮ್ಮೆ ನೆನಪಿಸಿದೆ. ಕುಟುಂಬದ ಬೆಂಬಲವಿಲ್ಲದಿದ್ದರೂ ಅನ್ಯಾಯದ ವಿರುದ್ಧ ಹೋರಾಡಿದ ಈ ಯುವತಿಯ ಧೈರ್ಯ, ಇಂತಹ ಪರಿಸ್ಥಿತಿಗಳನ್ನು ಎದುರಿಸುತ್ತಿರುವ ಅನೇಕರಿಗೆ ಪ್ರೇರಣೆಯಾಗಿದ್ದು, ನ್ಯಾಯ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಮತ್ತಷ್ಟು ಬಲಪಡಿಸಿದೆ.

# ಮರ್ಸಿಡಿಸ್ ಬೆಂಜ್ ಡಿವೈಡರ್‌ಗೆ ಡಿಕ್ಕಿ; ಯುವತಿ ಸಾವು, ಚಾಲಕ ಪರಾರಿ!



**ಬೆಂಗಳೂರು:** ಬೆಂಗಳೂರು ಗ್ರಾಮಂತರ ಜಿಲ್ಲೆಯ ಹೊಸಕೋಟೆ ಸಮೀಪದ ದೊಡ್ಡ ಹುಲ್ಲೂರು ಬಳಿ ಶನಿವಾರ ಐಷಾರಾಮಿ ಕಾರು ಮರ್ಸಿಡಿಸ್ ಬೆಂಜ್ ರಸ್ತೆಯ ಡಿವೈಡರ್‌ಗೆ ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ಯುವತಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಇಂದು ಬೆಳಗ್ಗೆ ಚೆನ್ನೈ ಎಕ್ಸ್‌ಪ್ರೆಸ್ ಹೆದ್ದಾರಿಯಲ್ಲಿ ಈ ಭೀಕರ ಅಪಘಾತ ಸಂಭವಿಸಿದ್ದು, ಕಾರು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದಿದೆ. ಅಪಘಾತವಾಗುತ್ತಿದ್ದಂತೆ, ಕಾರು ಚಾಲಕ ಸ್ಥಳದಿಂದ ಪರಾ–ರಿಯಾಗಿದ್ದು, ಕಾರಿನಲ್ಲಿದ್ದ ಯುವತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮೃತಳ ಗುರುತು ಇನ್ನೂ ಪತ್ತೆಯಾಗಿಲ್ಲ, ಅಪಘಾತದ ತೀವ್ರತೆಗೆ ಬೆಂಜ್ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಕಾರು ಚಾಲಕನ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿ ಚಾಲನೆಯೇ ಅಪಘಾತಕ್ಕೆ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಸ್ಥಳಕ್ಕೆ ಹೊಸಕೋಟೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಭೂ ಪರಿಹಾರ ನೀಡದ ಆರೋಪ: ಅಧಿಕಾರಿಗೆ ಸಾರ್ವಜನಿಕವಾಗಿ ಚಪ್ಪಲಿ ಏಟು

**ಬಾಗಲಕೋಟೆ:** ಹಲವು ವರ್ಷಗಳಿಂದ ಭೂ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡಿ ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿದ್ದ ರೈತರೊಬ್ಬರು, ಕೊನೆಗೆ ಆಕ್ರೋಶಗೊಂಡು ಅಧಿಕಾರಿಗೆ ಚಪ್ಪಲಿಯಿಂದ ಹೊಡೆದ ಘಟನೆ ಬಾಗಲಕೋಟೆಯಲ್ಲಿ ನಡೆದಿದ್ದು, ಇದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ವೈರಲ್ ಆಗಿದೆ. ಈ ಘಟನೆ ಭೂ ಪರಿಹಾರ ವಿತರಣೆಯ ವಿಳಂಬ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದ ಬಗ್ಗೆ ಮತ್ತೊಮ್ಮೆ ಚರ್ಚೆಗೆ ಕಾರಣವಾಗಿದೆ.



ಮಾಹಿತಿಯ ಪ್ರಕಾರ, ಬಾಗಲಕೋಟೆ ನಗರ ಸಂಪರ್ಕ ರಸ್ತೆ ಯೋಜನೆಗಾಗಿ 2004ರಲ್ಲಿ ದಾದೇನವರ್ ವೃತ್ತದ ಸಮೀಪದಲ್ಲಿದ್ದ ರೈತ ಬಸವರಾಜ ದೊಡ್ಡಮನಿ ಅವರ ಜಮೀನನ್ನು ಸರ್ಕಾರ ಸ್ವಾಧೀನಪಡಿಸಿಕೊಂಡಿತ್ತು. ಆದರೆ ಭೂಮಿ ಕಳೆದುಕೊಂಡ ರೈತರಿಗೆ ಸಮರ್ಪಕ ಪರಿಹಾರ ನೀಡುವ ವಿಚಾರದಲ್ಲಿ ವರ್ಷಗಳ ಕಾಲ ವಿಳಂಬವಾಗಿದ್ದು, ರೈತ ಬಸವರಾಜ ದೊಡ್ಡಮನಿ ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿದರೂ ಯಾವುದೇ ಸ್ಪಷ್ಟ ಪರಿಹಾರ ದೊರಕಿರಲಿಲ್ಲ ಎಂದು ಹೇಳಲಾಗಿದೆ.

ಕಳೆದ ಎರಡು ದಶಕಗಳಿಂದ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳ ಬಾಗಿಲು ತಟ್ಟುತ್ತಾ ಬಂದಿದ್ದ ರೈತ, ಅನೇಕ ಬಾರಿ ಅರ್ಜಿ ಸಲ್ಲಿಸಿದ್ದರೂ ಮತ್ತು ಅಧಿಕಾರಿಗಳನ್ನು ಭೇಟಿ ಮಾಡಿದ್ದರೂ ಸಮಸ್ಯೆ ಬಗೆಹರಿಯದ ಹಿನ್ನೆಲೆಯಲ್ಲಿ ತೀವ್ರ ನಿರಾಸೆಗೊಂಡಿದ್ದರು ಎನ್ನಲಾಗಿದೆ. ಪರಿಹಾರ ಸಿಗದ ನೋವು ಹಾಗೂ ಆಡಳಿತದ ನಿರ್ಲಕ್ಷ್ಯದಿಂದ ಅವರು ಮಾನಸಿಕವಾಗಿ ಕುಗ್ಗಿದ್ದರು ಎಂಬ ಮಾತುಗಳೂ ಕೇಳಿಬರುತ್ತಿವೆ.

ಇದೇ ವೇಳೆ, ಕಳೆದ ಒಂದು ವರ್ಷದಿಂದ 15 ಮಂದಿ ಸಫಾಯಿ ಕರ್ಮಚಾ–ರಿಗಳಿಗೆ ಪ್ಲಾಟ್ ಹಂಚಿಕೆ ಮಾಡದಿರುವುದನ್ನು ಖಂಡಿಸಿ ಡಿಎಸ್‌ಎಸ್ (ದಲಿತ ಸಂಘರ್ಷ ಸಮಿತಿ) ಮುಖಂಡರು ಬಿಟಿಡಿಎ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸುತ್ತಿದ್ದರು. ಪ್ಲಾಟ್ ಹಂಚಿಕೆ ಪ್ರಕ್ರಿಯೆ ವಿಳಂಬವಾಗಿರುವುದನ್ನು ವಿರೋಧಿಸಿ ಹೋರಾಟಗಾರರು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸುತ್ತಿದ್ದರು.

ಈ ಸಂದರ್ಭದಲ್ಲೇ ಕಚೇರಿಗೆ ಆಗಮಿಸಿದ್ದ ರೈತ ಬಸವರಾಜ ದೊಡ್ಡಮನಿ ತಮ್ಮ ಅಳಲನ್ನು ಡಿಎಸ್‌ಎಸ್ ಮುಖಂಡರ ಎದುರು ಹಂಚಿಕೊಂಡಿದ್ದಾರೆ. “ನನ್ನ ಜಮೀನು ಮುಳುಗಡೆಯಾಗಿ ಹಲವು ವರ್ಷಗಳಾದರೂ ಇನ್ನೂ ಪರಿಹಾರ ದೊರೆತಿಲ್ಲ. ಪರಿಹಾರಕ್ಕಾಗಿ ಕಚೇರಿಗೆ ಅಲೆದು ಅಲೆದು ಸಾಕಾಗಿದೆ” ಎಂದು ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದ್ದಾರೆ ಎಂದು ತಿಳಿದುಬಂದಿದೆ.

ರೈತನ ಅಳಲಿನ ನಡುವೆ ಅಲ್ಲಿದ್ದ ಬಿಟಿಡಿಎ ಹಿರಿಯ ಸಹಾಯಕ ಹಾಗೂ ಟೈಪಿಸ್ಟ್ ಆಗಿ ಕಾರ್ಯನಿರ್ವಹಿಸುತ್ತಿರುವ ನೀಲಕಂಠ ಅಂಕದ್ ಅವರೊಂದಿಗೆ ಮಾತಿನ ಚಕಮಕಿ ನಡೆದಿದೆ. ಆರಂಭದಲ್ಲಿ ವಾಗ್ವಾದದ ಮಟ್ಟದಲ್ಲಿದ್ದ ಮಾತುಕತೆ ಕೆಲವೇ ಕ್ಷಣಗಳಲ್ಲಿ ತೀವ್ರ ಸ್ವರೂಪ ಪಡೆದುಕೊಂಡಿದೆ. ಇಬ್ಬರ ಮಧ್ಯೆ ಮಾತಿನ ಜಗಳ ಉಲ್ಬಣವಾಗುತ್ತಿದ್ದಂತೆ ಕೋಪಗೊಂಡ ರೈತ ಬಸವರಾಜ ದೊಡ್ಡಮನಿ ತಮ್ಮ ಕಾಲಿನ ಚಪ್ಪಲಿಯನ್ನು ತೆಗೆದು ನೀಲಕಂಠ ಅಂಕದ್ ಅವರಿಗೆ ಎಲ್ಲರ ಎದುರೇ ಹೊಡೆದಿದ್ದಾರೆ.

ಈ ಅಚಾನಕ್ ಘಟನೆಯಿಂದ ಕಚೇರಿ ಆವರಣದಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಅಲ್ಲಿದ್ದ ಸಿಬ್ಬಂದಿ, ಹೋರಾಟಗಾರರು ಹಾಗೂ ಸಾರ್ವಜನಿಕರು ತಕ್ಷಣ ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು. ಘಟನೆಯಿಂದ ಕಚೇರಿ ಕಾರ್ಯಚಟುವಟಿಕೆಗಳಿಗೆ ತಾತ್ಕಾಲಿಕ ಅಡ್ಡಿಯಾಗಿದ್ದು, ಸಭೆಯೂ ಕೆಲಕಾಲ ಸ್ಥಗಿತಗೊಂಡಿತು ಎಂದು ತಿಳಿದುಬಂದಿದೆ.

ಘಟನೆಯ ವಿಡಿಯೋ ಈಗ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹ–ರಿದಾಡುತ್ತಿದ್ದು, ಸಾರ್ವಜನಿಕ ವಲಯದಲ್ಲಿ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿವೆ. ಕೆಲವರು ರೈತನ ನೋವು ಮತ್ತು ಆಕ್ರೋಶಕ್ಕೆ ಸಹಾನುಭೂತಿ ವ್ಯಕ್ತಪಡಿಸುತ್ತಿದ್ದರೆ, ಇನ್ನೂ ಕೆಲವರು ಅಧಿಕಾ–ರಿಗಳ ಮೇಲೆ ಹಲ್ಲೆ ನಡೆಸಿರುವುದನ್ನು ಖಂಡಿಸುತ್ತಿದ್ದಾರೆ. ಸರ್ಕಾರಿ ಅಧಿಕಾರಿಗಳ ಮೇಲಿನ ಹಲ್ಲೆ ಕಾನೂನುಬಾಹಿರವಾಗಿದ್ದು, ಈ ಸಂಬಂಧ ಸಂಬಂಧಪಟ್ಟ ಅಧಿಕಾರಿಗಳು ಮುಂದಿನ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.

# ಉಚಿತ ಬಸ್ ಪಾಸ್ ಯೋಜನೆಗೆ ಭರ್ಜರಿ ಸ್ಪಂದನೆ; 2 ದಿನದಲ್ಲಿ 2,764 ಪಾಸ್ ವಿತರಣೆ

**ಬೆಂಗಳೂರು:** ರಾಜ್ಯ ಸರ್ಕಾರ ಜಾರಿಗೆ ತಂದಿರುವ ವಿದ್ಯಾರ್ಥಿಗಳ ಉಚಿತ ಬಸ್ ಪಾಸ್ ಯೋಜನೆಗೆ ರಾಜ್ಯಾದ್ಯಂತ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಯೋಜನೆ ಆರಂಭವಾದ ಕೇವಲ ಎರಡು ದಿನಗಳಲ್ಲೇ ಸಾವಿರಾರು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ. ಶಿಕ್ಷಣಕ್ಕಾಗಿ ಪ್ರತಿದಿನ ದೂರದ ಊರುಗಳಿಗೆ ಪ್ರಯಾಣಿಸುವ ವಿದ್ಯಾರ್ಥಿಗಳ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡುವ ಉದ್ದೇಶದಿಂದ ಜಾರಿಗೆ ತರಲಾಗಿರುವ ಈ ಯೋಜನೆಗೆ ವಿದ್ಯಾರ್ಥಿಗಳು ಮತ್ತು ಪೋಷಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಅಧಿಕೃತ ಮಾಹಿತಿಯ ಪ್ರಕಾರ, ಯೋಜನೆ ಜಾ–ರಿಯಾದ ಮೊದಲ ಎರಡು ದಿನಗಳಲ್ಲಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಒಟ್ಟು 2,764 ಉಚಿತ ಬಸ್ ಪಾಸ್‌ಗಳನ್ನು ವಿತರಿಸಿವೆ. ಮೊದಲ ದಿನವಾದ ಶುಕ್ರವಾರ 821 ಪಾಸ್‌ಗಳನ್ನು ವಿತರಿಸಲಾಗಿದ್ದರೆ, ಎರಡನೇ ದಿನವಾದ ಶನಿವಾರ 1,943 ಪಾಸ್‌ಗಳನ್ನು ವಿತರಿಸಲಾಗಿದೆ. ಮೊದಲ ದಿನಕ್ಕೆ ಹೋಲಿಸಿದರೆ ಎರಡನೇ ದಿನ ವಿದ್ಯಾರ್ಥಿಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸಲ್ಲಿಕೆಯಾಗಿರುವುದು ಯೋಜನೆಗೆ ದೊರೆಯುತ್ತಿರುವ ಉತ್ತಮ ಪ್ರತಿಕ್ರಿಯೆಯನ್ನು ಸೂಚಿಸುತ್ತದೆ.

ನಾಲ್ಕು ಸಾರಿಗೆ ನಿಗಮಗಳ ಪೈಕಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಎನ್‌ಡಬ್ಲ್ಯೂಕೆಆರ್‌ಟಿಸಿ) ಅತಿ ಹೆಚ್ಚು 995 ಪಾಸ್‌ಗಳನ್ನು ವಿತರಿಸಿದೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) 860 ಪಾಸ್‌ಗಳನ್ನು ವಿತರಿಸಿದ್ದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) 641 ಪಾಸ್‌ಗಳನ್ನು ನೀಡಿದೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ವ್ಯಾಪ್ತಿಯಲ್ಲಿ 268 ಪಾಸ್‌ಗಳನ್ನು ವಿತ–ರಿಸಲಾಗಿದೆ ಎಂದು ತಿಳಿದುಬಂದಿದೆ.

ರಾಜ್ಯ ಸರ್ಕಾರ ಜೂನ್ 11ರಂದು ಈ ಸಂಬಂಧ ಅಧಿಕೃತ ಆದೇಶ ಹೊರಡಿಸಿದ್ದು, ರಾಜ್ಯದ ಎಲ್ಲ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯವನ್ನು ವಿಸ್ತ–ರಿಸಿದೆ. ವಿದ್ಯಾರ್ಥಿಗಳು ಆರ್ಥಿಕ ಕಾರಣಗಳಿಂದ ಶಿಕ್ಷಣದಿಂದ ದೂರ ಉಳಿಯಬಾರದು ಹಾಗೂ ಅವರಿಗೆ ಸುಲಭ ಮತ್ತು ಸುರಕ್ಷಿತ ಸಂಚಾರ ವ್ಯವಸ್ಥೆ ಒದಗಿಸಬೇಕು ಎಂಬ ಉದ್ದೇಶದಿಂದ ಈ ಯೋಜನೆ ಜಾರಿಗೆ ತರಲಾಗಿದೆ ಎಂದು ಸರ್ಕಾರ ತಿಳಿಸಿದೆ.

ಈ ಯೋಜನೆಯ ಪ್ರಮುಖ ವಿಶೇಷತೆಯೆಂದರೆ, ಕರ್ನಾಟಕದ ವಿದ್ಯಾರ್ಥಿಗಳು ನೆರೆಯ ರಾಜ್ಯಗಳ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿದ್ದರೂ ಉಚಿತ ಬಸ್ ಪಾಸ್ ಸೌಲಭ್ಯ ಪಡೆಯಬಹುದಾಗಿದೆ. ಅದೇ ರೀತಿ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು, ಕೇರಳ ಹಾಗೂ ಮಹಾರಾಷ್ಟ್ರದ ಗಡಿ ಭಾಗದ ವಿದ್ಯಾರ್ಥಿಗಳು ಕರ್ನಾಟಕದಲ್ಲಿ ಶಿಕ್ಷಣ ಪಡೆಯುತ್ತಿದ್ದರೆ ಅವರಿಗೂ ಈ ಯೋಜನೆಯ ಲಾಭ ದೊರೆಯಲಿದೆ. ಇದರಿಂದ ಗಡಿ ಭಾಗದ ಸಾವಿರಾರು ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.

ಸರ್ಕಾರದ ಅಂದಾಜಿನ ಪ್ರಕಾರ, ಈ ಯೋಜನೆಯ ಅನುಷ್ಠಾನಕ್ಕೆ ವಾರ್ಷಿಕವಾಗಿ ಸುಮಾರು 286.08 ಕೋಟಿ ರೂ. ವೆಚ್ಚವಾಗಲಿದೆ. ಇದಲ್ಲದೆ, ಪ್ರಕ್ರಿಯಾ ಶುಲ್ಕ ಮತ್ತು ಅಪಘಾತ ಪರಿಹಾರ ನಿಧಿಗಾಗಿ ಹೆಚ್ಚುವ–ರಿಯಾಗಿ 15 ಕೋಟಿ ರೂ. ಮೀಸಲಿಡಲಾಗಿದೆ. ಶಿಕ್ಷಣ ಮತ್ತು ವಿದ್ಯಾರ್ಥಿ ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡುವ ಸರ್ಕಾರದ ಕ್ರಮಗಳಲ್ಲಿ ಈ ಯೋಜನೆಯೂ ಪ್ರಮುಖವಾಗಿದೆ ಎಂದು ಹೇಳಲಾಗುತ್ತಿದೆ.

ಈ ಹಿಂದೆ ವಿದ್ಯಾರ್ಥಿ ಬಸ್ ಪಾಸ್ ವೆಚ್ಚವನ್ನು ಸರ್ಕಾರ, ಸಾರಿಗೆ ನಿಗಮಗಳು ಹಾಗೂ ವಿದ್ಯಾರ್ಥಿಗಳು ಹಂಚಿಕೊಂಡು ಭರಿಸುತ್ತಿದ್ದರು. ಆದರೆ ಹೊಸ ಯೋಜನೆಯಡಿ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕವಿಲ್ಲದೆ ಸಂಪೂರ್ಣ ಉಚಿತವಾಗಿ ಬಸ್ ಪಾಸ್ ನೀಡಲಾಗುತ್ತಿದೆ. ಇದರಿಂದ ಮಧ್ಯಮ ಹಾಗೂ ಬಡ ಕುಟುಂಬಗಳ ವಿದ್ಯಾರ್ಥಿಗಳಿಗೆ ಹೆಚ್ಚಿನ ಆರ್ಥಿಕ ನೆರವಾಗಲಿದೆ.

ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್ ಮೂಲಕ ತಮ್ಮ ಮನೆ, ಶಾಲೆ ಅಥವಾ ಕಾಲೇಜಿನಿಂದಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವ ವೇಳೆ ಶಿಕ್ಷಣ ಸಂಸ್ಥೆಯ ದಾಖಲೆಗಳು, ವಿದ್ಯಾರ್ಥಿ ಗುರುತಿನ ಚೀಟಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕಾಗುತ್ತದೆ. ಶಿಕ್ಷಣ ಅರ್ಹತೆ, ಪ್ರಯಾಣದ ದೂರ ಮಿತಿ ಹಾಗೂ ಪಾಸ್‌ನ ಮಾನ್ಯತಾ ಅವಧಿಗೆ ಸಂಬಂಧಿಸಿದ ನಿಯಮಗಳು ಅನ್ವಯವಾಗಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶಿಕ್ಷಣ ತಜ್ಞರ ಅಭಿಪ್ರಾಯದಂತೆ, ಈ ಯೋಜನೆಯಿಂದ ಗ್ರಾಮೀಣ ಪ್ರದೇಶಗಳು ಹಾಗೂ ದೂರದ ಊರುಗಳಿಂದ ಶಿಕ್ಷಣಕ್ಕಾಗಿ ನಗರ ಪ್ರದೇಶಗಳಿಗೆ ಪ್ರಯಾಣಿಸುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ. ಪ್ರಯಾಣ ವೆಚ್ಚ ಕಡಿಮೆಯಾಗುವುದ–ರಿಂದ ವಿದ್ಯಾರ್ಥಿಗಳ ಶಿಕ್ಷಣ ಮುಂದುವರಿಸುವ ಪ್ರಮಾಣ ಹೆಚ್ಚಾಗುವ ಸಾಧ್ಯತೆಯಿದೆ. ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳಿಗೆ ಈ ಯೋಜನೆ ವರದಾನವಾಗಲಿದೆ.

ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳಿಗೆ ನೇರವಾಗಿ ಪ್ರಯೋಜನವಾಗಲಿರುವ ಈ ಯೋಜನೆ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಗುವ ನಿರೀಕ್ಷೆಯಿದೆ. ಪ್ರಯಾಣ ವೆಚ್ಚದ ಹೊರೆ ಕಡಿಮೆಯಾಗುವುದರಿಂದ ವಿದ್ಯಾರ್ಥಿಗಳು ಶಿಕ್ಷಣದತ್ತ ಹೆಚ್ಚಿನ ಗಮನ ಹರಿಸಲು ಸಾಧ್ಯವಾಗಲಿದ್ದು, ಶಾಲಾ ಮತ್ತು ಕಾಲೇಜು ಶಿಕ್ಷಣಕ್ಕೆ ಮತ್ತಷ್ಟು ಉತ್ತೇಜನ ಸಿಗಲಿದೆ ಎಂದು ನಿರೀಕ್ಷಿಸಲಾಗಿದೆ.

# ಪ್ರವಾಸ ಮುಗಿಸಿ ಬರುವಾಗ ದುರಂತ: ಹೇಮಾವತಿ ಹಿನ್ನೀರಿನಲ್ಲಿ ಮೂವರು ಯುವಕರು ಜಲಸಮಾಧಿ





**ಹಾಸನ:** ಜಿಲ್ಲೆಯಲ್ಲಿ ಭೀಕರ ದುರಂತವೊಂದು ಸಂಭವಿಸಿದೆ. ಪ್ರವಾಸಿ ತಾಣವಾದ ಶೆಟ್ಟಿಹಳ್ಳಿ ಚರ್ಚ್ ವೀಕ್ಷಿಸಲು ಹೋಗಿದ್ದ ಬೆಂಗಳೂರು ಮೂಲದ ಮೂವರು ಯುವಕರು ಹೇಮಾವತಿ ಜಲಾಶಯದ ಹಿನ್ನೀರಿನಲ್ಲಿ ಮುಳುಗಿ ದಾರುಣವಾಗಿ ಸಾವನ್ನಪ್ಪಿದ್ದಾರೆ. ಸ್ನೇಹಿತರ ಕಣ್ಣೆದುರೇ ಮೂವರು ಯುವಕರು ಜಲಸಮಾಧಿಯಾದ ಕರುಣಾಜನಕ ಘಟನೆ ಹಾಸನ ತಾಲೂಕಿನ ಗೊರೂರು ಬಳಿಯಿರುವ ಹೇಮಾವತಿ ಜಲಾಶಯದಲ್ಲಿ ನಡೆದಿದೆ. ಗೊರೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಬೆಂಗಳೂರು ಮೂಲದ ಹತ್ತು ಜನ ಯುವಕರ ತಂಡವೊಂದು ಧರ್ಮಸ್ಥಳ ಪ್ರವಾಸಕ್ಕೆ ತೆರಳಿತ್ತು. ಶ್ರೀಕ್ಷೇತ್ರದ ದರ್ಶನ ಮುಗಿಸಿ ವಾಪಸ್ ಬರುವಾಗ ಹಾಸನ ತಾಲೂಕಿನ ಗೊರೂರು ಬಳಿಯಿರುವ ಪ್ರಸಿದ್ಧ ಶೆಟ್ಟಿಹಳ್ಳಿ ಚರ್ಚ್ ವೀಕ್ಷಿಸಲು ಬಂದಿದ್ದಾರೆ. ಈ ವೇಳೆ ಚರ್ಚ್ ಬಳಿ ಹಿನ್ನೀರನ್ನು ಕಂಡು ಖುಷಿಯಾದ ಯುವಕರು ನೀರಿನಲ್ಲಿ ಈಜಲು ಮುಂದಾಗಿದ್ದಾರೆ. ಆದರೆ, ಈಜು ಬಾರದಿದ್ದರೂ ಯುವಕರು ಹಿನ್ನೀರಿಗೆ ಇಳಿದಿರುವುದೇ ಈ ಭೀಕರ ದುರಂತಕ್ಕೆ ಕಾರಣವಾಗಿದೆ. ಚರಣ್ (20), ಮಿಲನ್ (23) ಮತ್ತು ಮಣಿಕಂಠ (20) ಮೃತ ದುರ್ದೈವಿಗಳು.

**ಸ್ನೇಹಿತರ ಕಣ್ಣೆದುರೇ ಮುಳುಗಿ ಸಾವು:** ಇನ್ನು ಯುವಕರು ನೀರಿನಲ್ಲಿ ಮುಳುಗುತ್ತಿದ್ದಂತೆ ಆತಂಕಗೊಂಡ ಉಳಿದ ಸ್ನೇಹಿತರು, ರಕ್ಷಿಸುವಂತೆ ದಡಕ್ಕೆ ಬಂದು ಜೋರಾಗಿ ಕಿರುಚಾಡಿದ್ದಾರೆ. ಆದರೆ ಸಕಾಲಕ್ಕೆ ಯಾವುದೇ ನೆರವು ಸಿಗದ ಕಾರಣ ಮೂವರು ಯುವಕರು ಸ್ನೇಹಿತರ ಕಣ್ಣೆದುರೇ ನೀರಿನಲ್ಲಿ ಮುಳುಗಿ ದುರ್ಮರಣ ಹೊಂದಿದ್ದಾರೆ.

ಸದ್ಯ ಘಟನಾ ಸ್ಥಳಕ್ಕೆ ಗೊರೂರು ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿದ್ದು, ಮೃತದೇಹಗಳನ್ನು ಹೊರತೆಗೆಯಲು ತೀವ್ರ ಕಾರ್ಯಾಚರಣೆ ನಡೆಸಿದ್ದಾರೆ. ಜತೆಗಿದ್ದ ಗೆಳೆಯರನ್ನು ಕಣ್ಣೆದುರೇ ಕಳೆದುಕೊಂಡ ಸ್ನೇಹಿತರ ಆಕ್ರಂದನ ಮುಗಿಲು ಮುಟ್ಟಿದೆ.

# ಟೊಮ್ಯಾಟೋಗೆ ಮತ್ತೆ ಡಿಮ್ಯಾಂಡ್: ಭರ್ಜರಿ ಬೆಲೆ ಕಂಡು ಖುಷಿಯಾದ ರೈತರು



**ಕೋಲಾರ:** ಕಳೆದ ಕೆಲ ತಿಂಗಳುಗಳಿಂದ ಬೆಲೆ ಕುಸಿತ, ಬೇಡಿಕೆ ಕೊರತೆ ಹಾಗೂ ಉತ್ಪಾದನಾ ವೆಚ್ಚ ಏರಿಕೆಯಿಂದ ಸಂಕಷ್ಟಕ್ಕೆ ಸಿಲುಕಿದ್ದ ಟೊಮ್ಯಾಟೋ ಬೆಳೆಗಾರರ ಮುಖದಲ್ಲಿ ಇದೀಗ ಮತ್ತೆ ಮಂದಹಾಸ ಮೂಡಿದೆ. ರಾಜ್ಯದ ಪ್ರಮುಖ ತರಕಾರಿ ಮಾರುಕಟ್ಟೆಗಳಲ್ಲಿ ಒಂದಾದ ಕೋಲಾರ ಎಪಿಎಂಸಿ ಮಾರುಕಟ್ಟೆಯಲ್ಲಿ ಟೊಮ್ಯಾಟೋಗೆ ಬೇಡಿಕೆ ಹೆಚ್ಚಾಗಿದ್ದು, ಬೆಲೆಯೂ ಏರಿಕೆಯ ಹಾದಿ ಹಿಡಿದಿದೆ. ಹಲವು ತಿಂಗಳು ನಷ್ಟ ಅನುಭವಿಸಿದ್ದ ರೈತರಿಗೆ ಈ ಬೆಳವಣಿಗೆ ಹೊಸ ಭರವಸೆ ಮೂಡಿಸಿದೆ.

ಪ್ರಸ್ತುತ ಕೋಲಾರ ಎಪಿಎಂಸಿ ಮಾರುಕಟ್ಟೆಯಲ್ಲಿ ವ್ಯಾಪಾರ ಚಟುವಟಿಕೆಗಳು ಗರಿಗೆದರಿದ್ದು, ರಾಜ್ಯದ ವಿವಿಧ ಜಿಲ್ಲೆಗಳ ಜೊತೆಗೆ ಹೊರ ರಾಜ್ಯಗಳಿಂದಲೂ ವ್ಯಾಪಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದಾರೆ. ಮಾರುಕಟ್ಟೆ ಸುತ್ತಮುತ್ತ ಟೊಮ್ಯಾಟೋ ಸಾಗಣೆಗೆ ನೂರಾರು ಲಾರಿಗಳು ಸಾಲುಗಟ್ಟಿ ನಿಂತಿರುವ ದೃಶ್ಯ ಸಾಮಾನ್ಯವಾಗಿದೆ. ಟೊಮ್ಯಾಟೋ ಪ್ಯಾಕಿಂಗ್ ಕೇಂದ್ರಗಳಲ್ಲಿ ಬೆಳಗ್ಗಿನಿಂದ ರಾತ್ರಿ ತನಕ ಕಾರ್ಮಿಕರು ನಿರಂತರವಾಗಿ ಕೆಲಸ ಮಾಡುತ್ತಿದ್ದು, ಮಾರುಕಟ್ಟೆ ಪ್ರದೇಶ ಸಂಪೂರ್ಣವಾಗಿ ವ್ಯಾಪಾರ ವಹಿವಾಟಿನಿಂದ ಕಂಗೊಳಿಸುತ್ತಿದೆ.

ಕಳೆದ ಎರಡು–ಮೂರು ತಿಂಗಳುಗಳಿಂದ ಟೊಮ್ಯಾಟೋ ಬೆಲೆ ತೀವ್ರ ಕುಸಿತ ಕಂಡಿತ್ತು. ಕೆಜಿಗೆ ಉತ್ಪಾದನಾ ವೆಚ್ಚವೇ ಹೆಚ್ಚಾಗಿದ್ದರೂ ಮಾರುಕಟ್ಟೆಯಲ್ಲಿ ಸಮರ್ಪಕ ಬೆಲೆ ಸಿಗದ ಕಾರಣ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದರು. ಕೆಲ ಸಂದರ್ಭಗಳಲ್ಲಿ ಟೊಮ್ಯಾಟೋ ಬೆಲೆ ಕೆಜಿಗೆ 10 ರಿಂದ 15 ರೂಪಾಯಿವರೆಗೆ ಇಳಿಕೆಯಾಗಿದ್ದರಿಂದ ರೈತರು ಸಾರಿಗೆ ವೆಚ್ಚವನ್ನೂ ವಾಪಸ್ ಪಡೆಯಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿತ್ತು. ಕೆಲವು ಕಡೆ ರೈತರು ಬೆಳೆ ಕಟಾವು ಮಾಡದೇ ಹೊಲದಲ್ಲೇ ಬಿಟ್ಟ ಘಟನೆಗಳೂ ವರದಿಯಾಗಿದ್ದವು.

ಟೊಮ್ಯಾಟೋ ಬೆಲೆ ಕುಸಿತಕ್ಕೆ ಹಲವು ಕಾರಣಗಳಿದ್ದು, ಅಂತಾರಾಷ್ಟ್ರೀಯ ಬೆಳವಣಿಗೆಗಳೂ ಪರೋಕ್ಷವಾಗಿ ಪರಿಣಾಮ ಬೀರಿದ್ದವು. ಇರಾನ್–ಇಸ್ರೇಲ್ ಸಂಘರ್ಷದಿಂದ ವಾಣಿಜ್ಯ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿ, ಹೋಟೆಲ್ ಮತ್ತು ಆಹಾರ ಉದ್ಯಮದ ಮೇಲೂ ಪರಿಣಾಮ ಬೀರಿತ್ತು. ಹೋಟೆಲ್ ಉದ್ಯಮವೇ ಟೊಮ್ಯಾಟೋ ಬಳಕೆಯ ಪ್ರಮುಖ ವಲಯವಾಗಿರುವುದ–ರಿಂದ ಬೇಡಿಕೆ ಕುಸಿತ ಕಂಡಿತ್ತು. ಜೊತೆಗೆ ಹೆಚ್ಚಿದ ಬಿಸಿಲಿನ ತಾಪಮಾನ ಹಾಗೂ ಹವಾಮಾನ ವೈಪರೀತ್ಯದಿಂದ ಬೆಳೆ ಉತ್ಪಾದನೆಗೂ ಹಾನಿಯಾಗಿತ್ತು.

ಆದರೆ ಇದೀಗ ಪರಿಸ್ಥಿತಿ ಸಂಪೂರ್ಣ ಬದಲಾಗುತ್ತಿದೆ. ಜೂನ್ ತಿಂಗಳ ಆರಂಭದೊಂದಿಗೆ ಟೊಮ್ಯಾಟೋ ಸೀಸನ್ ಆರಂಭವಾಗಿದ್ದು, ಕಳೆದ ಒಂದು ವಾರದಿಂದ ಕೋಲಾರ ಎಪಿಎಂಸಿ ಮಾರುಕಟ್ಟೆಯಲ್ಲಿ ಬೆಲೆ ಗಣನೀಯ ಏರಿಕೆ ಕಂಡಿದೆ. ಈ ಹಿಂದೆ ಕೆಜಿಗೆ 10 ರಿಂದ 15 ರೂಪಾಯಿಗೆ ಮಾರಾಟವಾಗುತ್ತಿದ್ದ ಟೊಮ್ಯಾಟೋ ಈಗ 30 ರಿಂದ 40 ರೂಪಾಯಿವರೆಗೆ ಮಾರಾಟವಾಗುತ್ತಿದೆ. ಇದರಿಂದ ರೈತರು ನಿರಾಳರಾಗಿದ್ದು, ಉತ್ತಮ ಆದಾಯದ ನಿರೀಕ್ಷೆಯಲ್ಲಿದ್ದಾರೆ.

ಟೊಮ್ಯಾಟೋ ಬೆಲೆ ಏರಿಕೆಯ ಪರಿಣಾಮವಾಗಿ 15 ಕೆಜಿ ತೂಕದ ಒಂದು ಬಾಕ್ಸ್ ಟೊಮ್ಯಾಟೋ ಬೆಲೆ 150–200 ರೂಪಾಯಿಯಿಂದ 500–550 ರೂಪಾಯಿವರೆಗೆ ಏರಿಕೆಯಾಗಿದೆ. ಕೆಲ ಉತ್ತಮ ಗುಣಮಟ್ಟದ ಟೊಮ್ಯಾಟೋ ಬಾಕ್ಸ್‌ಗಳು ಇದಕ್ಕಿಂತಲೂ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತಿರುವುದಾಗಿ ವ್ಯಾಪಾರಿಗಳು ತಿಳಿಸಿದ್ದಾರೆ. ಬೆಲೆ ಏರಿಕೆಯಿಂದ ರೈತರು ತಮ್ಮ ಉತ್ಪನ್ನಗಳಿಗೆ ಉತ್ತಮ ಪ್ರತಿಫಲ ಪಡೆಯುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ದೆಹಲಿ, ನಾಸಿಕ್, ಉತ್ತರ ಪ್ರದೇಶ, ಮಧ್ಯ ಪ್ರದೇಶ, ಗುಜರಾತ್, ಹರಿಯಾಣ ಸೇರಿದಂತೆ ದೇಶದ ವಿವಿಧ ರಾಜ್ಯಗಳಿಂದ ಕೋಲಾರ ಟೊಮ್ಯಾಟೋಗೆ ಹೆಚ್ಚಿನ ಬೇಡಿಕೆ ಬರುತ್ತಿದೆ. ಸ್ಥಳೀಯ ಉತ್ಪಾದನೆ ಕಡಿಮೆಯಾಗಿರುವ ರಾಜ್ಯಗಳ ವ್ಯಾಪಾರಿಗಳು ದೊಡ್ಡ ಪ್ರಮಾಣದಲ್ಲಿ ಟೊಮ್ಯಾಟೋ ಖರೀದಿಸಲು ಕೋಲಾರ ಮಾರುಕಟ್ಟೆಯತ್ತ ಮುಖ ಮಾಡಿರುವುದು ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ.

ಪ್ರತಿ ವರ್ಷ ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ಕೋಲಾರ ಜಿಲ್ಲೆಯಲ್ಲಿ ಟೊಮ್ಯಾಟೋ ಸೀಸನ್ ಜೋರಾಗಿರುತ್ತದೆ. ಮಳೆಗಾಲದ ಸಮಯದಲ್ಲಿ ಹಲವು ರಾಜ್ಯಗಳಲ್ಲಿ ಸ್ಥಳೀಯ ಉತ್ಪಾದನೆ ಕುಸಿಯುವುದರಿಂದ ವ್ಯಾಪಾರಿಗಳು ಕೋಲಾರದತ್ತ ಮುಖ ಮಾಡುತ್ತಾರೆ. ಈ ಅವಧಿಯಲ್ಲಿ ಕೋಲಾರ ಮಾರುಕಟ್ಟೆಯಲ್ಲಿ ಸಹಜವಾಗಿಯೇ ವ್ಯಾಪಾರ ಚಟುವಟಿಕೆಗಳು ಹೆಚ್ಚಾಗುತ್ತವೆ ಮತ್ತು ರೈತರಿಗೆ ಉತ್ತಮ ಬೆಲೆ ದೊರೆಯುತ್ತದೆ.

ಈ ಹಿಂದೆ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಟೊಮ್ಯಾಟೋ ಮಾತ್ರ ಹೆಚ್ಚಿನ ಪ್ರಮಾಣದಲ್ಲಿ ಮಾರುಕಟ್ಟೆಗೆ ಬರುತ್ತಿತ್ತು. ಆದರೆ ಕಳೆದ ಕೆಲವು ವರ್ಷಗಳಲ್ಲಿ ದಕ್ಷಿಣ ಕರ್ನಾಟಕದ ಹಲವು ಜಿಲ್ಲೆಗಳ ರೈತರು ಸಹ ಟೊಮ್ಯಾಟೋ ಬೆಳೆಯತ್ತ ಆಸಕ್ತಿ ತೋರಿದ್ದು, ಮಂಡ್ಯ, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ ಹಾಗೂ ಹಾಸನ ಸೇರಿದಂತೆ ಹಲವು ಜಿಲ್ಲೆಗಳಿಂದಲೂ ಟೊಮ್ಯಾಟೋ ಕೋಲಾರ ಮಾರುಕಟ್ಟೆಗೆ ಆಗಮಿಸುತ್ತಿದೆ.

ಮಾರುಕಟ್ಟೆ ತಜ್ಞರು ಮತ್ತು ವ್ಯಾಪಾರಿಗಳ ಅಭಿಪ್ರಾಯದಂತೆ, ಮುಂದಿನ ಎರಡು–ಮೂರು ತಿಂಗಳುಗಳ ಕಾಲ ಟೊಮ್ಯಾಟೋಗೆ ಉತ್ತಮ ಬೇಡಿಕೆ ಮುಂದುವರಿಯುವ ಸಾಧ್ಯತೆ ಇದೆ. ಹೊರ ರಾಜ್ಯಗಳ ಬೇಡಿಕೆ ಇದೇ ರೀತಿ ಮುಂದುವರಿದರೆ ಮುಂದಿನ ಒಂದು ತಿಂಗಳಲ್ಲಿ 15 ಕೆಜಿ ತೂಕದ ಒಂದು ಬಾಕ್ಸ್ ಟೊಮ್ಯಾಟೋ ಬೆಲೆ ಸಾವಿರ ರೂಪಾಯಿ ಗಡಿ ದಾಟುವ ಸಾಧ್ಯತೆಯೂ ಇದೆ ಎಂದು ಅಂ–ದಾಜಿಸಲಾಗಿದೆ.